ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಪಾಟೀ ಸವಾಲು 2 ನೇ ಎದುರುದಾರರ ಪರ ವಕೀಲರಿಂದಃ-

ನನ್ನ ಡಿ.ಎಲ್ ಅನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ತೊಂದರೆ ಇರುವುದಿಲ್ಲ. ನನ್ನ ಬಳಿ ಡಿ.ಎಲ್ ಇಲ್ಲದೇ ನಾನೇ ವಾಹನವನ್ನು ಚಾಲನೆ ಮಾಡಿಕೊಂಡು ಹೋಗಿ ಡಿಕ್ಕಿಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ನಾರಾಯಣ ಆಸ್ಪತ್ರೆಯಲ್ಲಿ ಒಂದು ವಾರ ಒಳರೋಗಿಯಾಗಿ ದಾಖಲಾಗಿದ್ದೆ. ಯಾವ ದಿನಾಂಕದಿಂದ ಯಾವ ದಿನಾಂಕದವೆಗೆ ದಾಖಲಿಗಿದ್ದೆ ಎಂದು ಹೇಳಲು ಬರುವುದಿಲ್ಲ. ನಿಪಿ-9 ರಂತೆ ಹಣ ಪಾವತಿ ಮಾಡಿರುವ ಬಗ್ಗೆ ರಶೀದಿ ನನ್ನ ಬಳಿ ಇರುತ್ತದೆ. ಅವರ ಬಳಿ ಇದ್ದ ರಶೀದಿಯನ್ನು ತೆಗೆದು ತೋರಿಸಿರುತ್ತಾರೆ. ನಾರಾಯಣ ಆಸ್ಪತ್ರೆಯಿಂದ ರಾಜರಾಜೇಶ್ವರಿ ಆಸ್ಪತ್ರೆಗೆ ಚಿಕಿತ್ಸೆ ಪಡೆದುಕೊಳ್ಳಲು ನಾರಾಯಣಯಿಂದ ಶಿಫಾರಸ್ಸು ಮಾಡಿರುತ್ತಾರಾ ಎಂದರೆ ಸಾಕ್ಷಿ ಇಲ್ಲ ನನೇ ಹೋಗಿ ತೋರಿಸಿಕೊಂಡಿರುತ್ತೇನೆ ಎಂದು ನುಡಿಯುತ್ತಾರೆ. ನಾನು ಆರ್. ಆರ್. ಆಸ್ಪತ್ರೆಯಲ್ಲಿ 3 ದಿನಗಳ ಕಾಲ ಒಳರೋಗಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆ. ನಾನು ಆರ್.ಆರ್. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುವ ಬಗ್ಗೆ ಡಿಸ್ಚಾರ್ಜ್ ಸಮರಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ತೊಂದರೆ ಇರುವುದಿಲ್ಲ ಎಂದರೆ ಸರಿ. ನಿಪಿ-9 ರ ಬಿಲ್ ನಂ. 3 ರಿಂದ 10 ರವರಿಗೆನ ವೈದ್ಯಕೀಯ ಬಿಲ್ ಗಳು ಆಯುಷ್ಮಾನ್ ಬಿಲ್ ಗಳಾಗಿರುತ್ತವೆ ಎಂದರೆ ಸರಿ. ಬಿಲ್ ನಂ. 57 ರ ನನಗೆ ಸಂಬಂಧಪಟ್ಟಿರುವುದಿಲ್ಲ ಅದು ನನ್ನ ಮಗಳಿಗೆ ಸಂಬಂಧಪಟ್ಟಿರುತ್ತದೆ. ಬಿಲ್ ನಂ. 81 ಮತ್ತು 89 ರಿಂದ 99 ರವರಿಗೆನ ಬಿಲ್ ಗಳು ಒಂದೇ ಅಕ್ಷರದಲ್ಲಿ ಒಂದೇ ಪೆನ್ ನಲ್ಲಿ

ಬರೆಯಲಾಗಿರುತ್ತದೆ ಎಂದರೆ ಸರಿಯಲ್ಲ. ಸದರಿ ಬಿಲ್ ಗಳನ್ನು ಹೆಚ್ಚಿನ ಪರಿಹಾರ ಹಣ ಪಡೆಯುವ ಸಲುವಾಗಿ ನಾನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ.

ಸಾಕ್ಷಿ ಅಪಘಾತವಾದ ದಿನ ನೀವು ಅಪಪಘಾತಪಡಿಸಿದ ವಾಹನವನ್ನು ಎಷ್ಟುದೂರದಲ್ಲಿ ನೋಡಿರುತ್ತೀರಾ ಎಂದರೆ ಸಾಕ್ಷಿ ಅಪಘಾತಪಸಿದ ನಂತರವೇ ನಾನು ನೋಡಿರುತ್ತೇನೆ ಎಂದು ನುಡಿಯುತ್ತಾರೆ. ಅಪಘಾತಕ್ಕೆ ಸಂಬಂಧಿಸಿದಂತೆ ಪೊಲೀಸರು ತಯಾರಿಸಿರುವ ಸ್ಕೆಚ್ ಅನ್ನು ನ್ಯಾಯಾಲಯಕ್ಕೆ ತಂದು ಹಾಜರುಪಡಿಸಲು ನನಗೆ ತೊಂದರೆ ಇರುವುದಿಲ್ಲ.

ಈ ಹಂತದಲ್ಲಿ ಬೆಳಗಿನ ನ್ಯಾಯಾಲಯದ ಸಮಯ ಮುಕ್ತಾಯವಾದ ಕಾರಣ ಮುಂದೂಡಾಲಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ ಬಿ.ಟಿ)
ರಾಮನಗರದ ಮೋಟಾರು ವಾಹನಗಳ ಅಪಘಾತದ
ಪರಿಹಾರಗಳ ಹೆಚ್ಚುವರಿ ನ್ಯಾಯಾ ಮಂಡಳಿಯ
ಪೀಠಾಧಿಕಾರಿಗಳು

ಪಿ.ಡಬ್ಲ್ಯೂ.-1(ರಾಮಕೃಷ್ಣ)